



ಅರುಣ ಪಿ. ಭಟ್ಟ

## ವಾರಭವಿಷ್ಯ: 06.10.2020ರಿಂದ 12.102022ರವರೆಗೆ




ವಾರದ ಶುರುವಿನಲ್ಲಿ ಕೆಲವು ದೈಹಿಕ ಸಮಸ್ಯೆಗಳು ಎದುರಾಗಲಿವೆ. ಅನಾರೋಗ್ಯ ಸಮಸ್ಯೆ ಕೂಡ ಕಾಡಬಹುದು. ಕೌಟುಂಬಿಕ ವಿಷಯಗಳ ಬಗ್ಗೆ ಅಳೆದು ತೂಗಿ ವ್ಯವಹರಿಸಿ. ಜತೆಗೆ ತಾಳ್ಮೆ ಅಗತ್ಯ. ವಾರದ ಮಧ್ಯಭಾಗದಲ್ಲಿ ನಿಮ್ಮ ತಾಳ್ಮೆ ಹಾಗೂ ಸಮಾಧಾನದಿಂದಲೇ ಕೆಲವು ಶುಭ ವಿಚಾರಗಳು ನಡೆಯಲಿವೆ. ಆರೋಗ್ಯದಲ್ಲಿ ಕೂಡ ಚೇತರಿಕೆ ಕಾಣಿಸಿಕೊಳ್ಳಲಿದೆ. ಶುಭದಿನ 07. ವಿಷ್ಣು ಸಹಸ್ರನಾಮ ಪಠಿಸಿರಿ.




ಹಿರಿಯರಿಂದ ಅವಶ್ಯವಾದ ಜ್ಞಾನ ಸಂಪಾದನೆ ಮಾಡುತ್ತೀರಿ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಲು ಉತ್ತಮವಾದ ಸಮಯ. ಕುಟುಂಬಸ್ಥರಿಗೆ ನಿಮ್ಮ ಮೇಲಿನ ಪ್ರೀತಿ ಹಾಗೂ ಕಾಳಜಿ ಹೆಚ್ಚಾಗಲಿದೆ. ವಾರದ ಮಧ್ಯ ಭಾಗದಲ್ಲಿ ಖರ್ಚು ಬಹಳ ಹೆಚ್ಚಾಗಲಿದೆ. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಆರೋಗ್ಯದಲ್ಲಿ ಕೂಡ ಕೆಲ ಸಮಸ್ಯೆ ಕಾಣಿಸಿಕೊಳ್ಳಬಹುದು. ಶುಭದಿನ 09. ಹನುಮಾನ್ ಚಾಲೀಸ್ ಓದಿರಿ.




ಬಹು ದಿನಗಳ ಆಸೆ ಪೂರೈಸಿಕೊಳ್ಳಲು ಅವಕಾಶ ದೊರೆಯುತ್ತದೆ. ಈ ಅವಧಿಯಲ್ಲಿ ಸಮಸ್ಯೆಗಳ ನಿವಾರಣೆಗೆ ನಿಮಗೆ ದಾರಿ ದೊರೆಯುತ್ತದೆ. ಆರೋಗ್ಯವೂ ಉತ್ತಮವಾಗಿರುತ್ತದೆ. ದೈನಂದಿನ ಕೆಲಸ ಕಾರ್ಯಗಳಲ್ಲಿ ಯಾವ ಬದಲಾವಣೆಯೂ ಅಗತ್ಯ ಎನಿಸುವುದಿಲ್ಲ. ವಾರದ ಮಧ್ಯ ಭಾಗದಲ್ಲಿ ಆದಾಯದಲ್ಲಿ ಹೆಚ್ಚಳವಾಗುತ್ತದೆ. ಆರೋಗ್ಯ ಸಮಸ್ಯೆ ಕಾಣಿಸಿಕೊಳ್ಳಬಹುದು. ಶುಭದಿನ 10. ಆಂಜನೇಯ ಉಪಾಸನೆ ಮಾಡಿರಿ.




ವಾರದ ಆರಂಭದಲ್ಲಿ ಸಾಮಾಜಿಕ ಸ್ಥಾನಮಾನ ಹೆಚ್ಚಿಸಿಕೊಳ್ಳುವುದಕ್ಕೆ ಶ್ರಮವನ್ನು ಹಾಕುತ್ತೀರಿ. ಬಂದ ಅವಕಾಶವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವಿರಿ. ಈ ಅವಧಿಯಲ್ಲಿ ಕುಟುಂಬವು ನಿಮ್ಮ ಬೆಂಬಲಕ್ಕೆ ಸಿದ್ಧವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರಗಳಲ್ಲಿ ಅಭಿವೃದ್ಧಿ. ಸಂತಾನ ಅಪೇಕ್ಷಿತ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶುಭದಿನ 12. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಸ್ಥರು ಬಹಳ ವೇಗವಾಗಿ ತಮ್ಮ ಪಾಲಿನ ಕೆಲಸವನ್ನು ಮಾಡಿ ಮುಗಿಸುತ್ತೀರಿ. ಹಣಕಾಸು ಪರಿಸ್ಥಿತಿ ಕೆಟ್ಟು ಇತರರ ಕೆಂಗಣ್ಣಿಗೆ ಗುರಿಯಾಗುತ್ತೀರಿ. ಪದೇ ಪದೇ ಆರೋಪದಿಂದ ಬೇಸರಕ್ಕೆ ಒಳಗಾಗುತ್ತೀರಿ. ಯಾರನ್ನೂ ನಂಬಲಾರದು ತೀರ್ಮಾನಕ್ಕೆ ಬರುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯವು ಉತ್ತಮವಾಗಿರುತ್ತದೆ. ಶುಭದಿನ 11. ಸಂಕಷ್ಟಹರ ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ಜೀವನ ತುಂಬ ಚೆನ್ನಾಗಿರುತ್ತದೆ. ಕುಟುಂಬ ಸದಸ್ಯರ ಮೇಲೆ ನಿಮಗಿರುವ ವಿಶ್ವಾಸ ಮತ್ತಷ್ಟು ಹೆಚ್ಚಾಗುತ್ತದೆ. ಸಂಗಾತಿ ಮತ್ತು ಮಕ್ಕಳ ಜತೆಗೆ ಹೆಚ್ಚಿನ ಸಮಯ ಕಳೆಯುತ್ತೀರಿ. ಆರೋಗ್ಯವು ಉತ್ತಮವಾಗಿರುತ್ತದೆ. ಪಿತ್ರಾರ್ಜಿತ ಆಸ್ತಿ ಮೇಲೆ ಯಾರೋ ಒಬ್ಬರು ಹಕ್ಕು ಚಲಾಯಿಸುವ ಸಾಧ್ಯತೆ ಇದೆ. ಸಂಬಂಧದಲ್ಲಿ ಬಹಳ ಕಿರಿಕಿರಿ ಉಂಟಾಗುತ್ತದೆ. ಶುಭದಿನ 12. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ದಿನದಿನಕ್ಕೂ ಹೆಚ್ಚಾಗುತ್ತಿರುವ ಖರ್ಚನ್ನು ಕಡಿಮೆ ಮಾಡಿಕೊಳ್ಳಲು ಯೋಜನೆ ರೂಪಿಸುತ್ತೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ಸಿಗುವುದು ಕಷ್ಟವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವೈವಾಹಿಕ ಜೀವನದಲ್ಲಿ ಪ್ರಗತಿ ಇದೆ. ವ್ಯಾಪಾರದ ಅಭಿವೃದ್ಧಿಗೆ ಯತ್ನಿಸುತ್ತಿರುವವರಿಗೆ ಅತ್ಯುತ್ತಮ ಅವಕಾಶಗಳು ದೊರೆಯಲಿವೆ. ಶುಭದಿನ 10. ಲಿಂಗಾಷ್ಟಕ ಪಠಿಸಿರಿ.




ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಒಟ್ಟಾರೆ ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈ ವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಶುಭದಿನ 11. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಸ್ವಚ್ಛ ವ್ಯಕ್ತಿತ್ವ ಎಂಬ ಹೆಸರು ಪಡೆಯಲಿದ್ದೀರಿ. ನಿಮ್ಮ ಈ ಪ್ರಯತ್ನದಲ್ಲಿ ಯಶಸ್ಸು ಪಡೆಯಲು ಹಲವು ಅವಕಾಶಗಳು ದೊರೆಯಲಿವೆ. ಮನೆಯಲ್ಲಿ ಸಂತೋಷವಾದ ವಾತಾವರಣ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆದಾಯದಲ್ಲಿ ಹೆಚ್ಚಳ ಆಗಲಿದೆ. ಕೊನೆ ಮೂರು ದಿನ ನಾನಾ ರೀತಿಯಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 12. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆಯತ್ತ ಹೆಚ್ಚು ಗಮನ ನೀಡುತ್ತೀರಿ. ಸಣ್ಣ ಸಣ್ಣ ಬದಲಾವಣೆಗಳನ್ನು ಅಳವಡಿಸಿಕೊಳ್ಳುತ್ತಾ ದೊಡ್ಡದೊಂದು ಬದಲಾವಣೆಗೆ ಸಿದ್ಧರಾಗುತ್ತೀರಿ. ಆರೋಗ್ಯದಲ್ಲಿ ಏರುಪೇರಾಗಬಹುದು. ವಾರದ ಮಧ್ಯ ಭಾಗದಲ್ಲಿ ದೊಡ್ಡ ಮಟ್ಟದ ಉದ್ಯಮ ನಡೆಸುತ್ತಿರುವವರಿಗೆ ತುಂಬ ಉತ್ತಮವಾದ ಸಮಯ. ಶುಭದಿನ 08. ವಿಷ್ಣು ಸಹಸ್ರನಾಮ ಓದಿರಿ.




ವಾರದ ಆರಂಭದಲ್ಲಿ ಉದ್ಯಮಿಗಳು ತಮ್ಮ ಉತ್ಪನ್ನಗಳನ್ನು ಸ್ಥಳೀಯ ಮಾರುಕಟ್ಟೆಯಲ್ಲಿ ಹೆಚ್ಚು ಪ್ರಚಾರ ಮಾಡಲು ಸಮಯ ಮೀಸಲಿಡಲಿದ್ದೀರಿ. ನಿಮ್ಮ ಶ್ರಮಕ್ಕೆ ಸಿಗುವ ಪ್ರತಿಫಲ ವೇಗವಾಗಿ ದೊರೆಯುತ್ತಿದೆ ಎಂಬ ಅಂಶ ಗಮನಕ್ಕೆ ಬರಲಿದೆ. ವಾರದ ಮಧ್ಯ ಭಾಗದಲ್ಲಿ ಉನ್ನತ ಶಿಕ್ಷಣದಲ್ಲಿ ಉತ್ತಮ ಸಾಧನೆ ಮಾಡುವ ಅವಕಾಶಗಳಿವೆ. ಶುಭದಿನ 10. ಚಂಡಿ ಪಾರಾಯಣ ಮಾಡಿರಿ.




ವಾರದ ಶುರುವಿನಲ್ಲಿ ಆರೋಗ್ಯದ ಬಗ್ಗೆ ಅಗತ್ಯವಾದ ಕಾಳಜಿ ವಹಿಸುವುದು ಬಹಳ ಮುಖ್ಯ. ನಿಮ್ಮ ದೈನಂದಿನ ಕಾರ್ಯ ಕಲಾಪಗಳು ಹೆಚ್ಚು ಪ್ರೋತ್ಸಾಹದಾಯಕವಾಗಿ ಇರುತ್ತವೆ. ಭವಿಷ್ಯದ ಬಗ್ಗೆ ಬಹಳ ಚಿಂತೆ ಮಾಡುತ್ತೀರಿ. ಕಾಪಾಡಿಕೊಂಡು ಬಂದಿದ್ದ ವರ್ಚಸ್ಸು ಸಂಗಾತಿಯಿಂದಾಗಿ ಹಾಳಾಗುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಬಾಂಧವ್ಯ ಉತ್ತಮಗೊಳ್ಳುತ್ತದೆ. ಶುಭದಿನ 12. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.